ವಿಮೋಚನಕಾಂಡ 15:9 ಶತ್ರುವು--ನಾನು ಹಿಂದಟ್ಟಿ, ಹಿಡಿ ಯುವೆನು, ಕೊಳ್ಳೆಯನ್ನು ಹಂಚಿಕೊಳ್ಳುವೆನು, ನನ್ನ ಆಶೆಗಳು ಅವರಿಂದ ತೃಪ್ತಿಹೊಂದುವವು. ನಾನು ನನ್ನ ಖಡ್ಗವನ್ನು ಹಿರಿಯುವೆನು, ನನ್ನ ಕೈ ಅವರನ್ನು ಸಂಹಾರ ಮಾಡುವದು ಅಂದನು.

ವಿಮೋಚನಕಾಂಡ 18:21 ಇದಲ್ಲದೆ ನೀನು ಸಮಸ್ತ ಜನರೊಳಗೆ ಸಮರ್ಥರು ಅಂದರೆ ದೇವರಿಗೆ ಭಯ ಪಡುವವರೂ ಸತ್ಯವಂತರೂ ದುರಾಶೆಯನ್ನು ಹಗೆ ಮಾಡುವವರೂ ಆಗಿರುವ ಇಂಥವರನ್ನು ಸಾವಿರ ಜನರ ಮೇಲೆಯೂ ನೂರು ಜನರ ಮೇಲೆಯೂ ಐವತ್ತು ಜನರ ಮೇಲೆಯೂ ಹತ್ತು ಜನರ ಮೇಲೆಯೂ ಅಧಿಕಾರಿಗಳನ್ನಾಗಿ ನೇಮಿಸಬೇಕು.

ವಿಮೋಚನಕಾಂಡ 20:14,17 ವ್ಯಭಿಚಾರ ಮಾಡಬಾರದು. 17 ನೀನು ನಿನ್ನ ನೆರೆಯವನ ಮನೆಯನ್ನು ಆಶಿಸ ಬಾರದು, ನಿನ್ನ ನೆರೆಯವನ ಹೆಂಡತಿಯನ್ನೂ ಆಶಿಸ ಬಾರದು; ಅವನ ದಾಸನನ್ನಾಗಲಿ ದಾಸಿಯನ್ನಾಗಲಿ ಎತ್ತನ್ನಾಗಲಿ ಕತ್ತೆಯನ್ನಾಗಲಿ ನಿನ್ನ ನೆರೆಯವನಿಗೆ ಇರುವ ಯಾವದನ್ನೂ ಆಶಿಸಬಾರದು ಎಂದು ಹೇಳಿದನು.

ಅರಣ್ಯಕಾಂಡ 11:4 ಆಗ ಅವರೊಳಗಿದ್ದ ಮಿಶ್ರವಾದ ಗುಂಪಿನ ಜನರು ದುರಾಶೆಪಟ್ಟರು. ಇಸ್ರಾಯೇಲ್ ಮಕ್ಕಳು ಸಹ ತಿರಿಗಿ ಅತ್ತು--ನಮಗೆ ತಿನ್ನುವದಕ್ಕೆ ಮಾಂಸವನ್ನು ಕೊಡು ವವರು ಯಾರು?

ಧರ್ಮೋಪದೇಶಕಾಂಡ 5:21 ನಿನ್ನ ನೆರೆಯವನ ಹೆಂಡತಿಯನ್ನು ಆಶಿಸಬೇಡ; ನೆರೆಯವನ ಮನೆಯನ್ನೂ ಅವನ ಹೊಲವನ್ನೂ ದಾಸ ದಾಸಿಯರನ್ನೂ ಪಶು ಕತ್ತೆಗಳನ್ನೂ ನಿನ್ನ ನೆರೆಯವನಿಗೆ ಇರುವ ಯಾವದನ್ನೂ ಆಶಿಸಬೇಡ ಎಂದು ಹೇಳಿದನು.

ಧರ್ಮೋಪದೇಶಕಾಂಡ 12:20 ನಿನ್ನ ದೇವರಾದ ಕರ್ತನು ನಿನಗೆ ವಾಗ್ದಾನ ಮಾಡಿದ ಹಾಗೆ ನಿನ್ನ ಮೇರೆಯನ್ನು ವಿಸ್ತಾರಮಾಡು ವಾಗ ನೀನು--ನನ್ನ ಪ್ರಾಣವು

ಮಾಂಸವನ್ನು ತಿನ್ನ ಬೇಕೆಂದು ನಾನು ಆಶೆಪಡುವದರಿಂದ ನಾನು ಮಾಂಸ ವನ್ನು ತಿನ್ನುವೆನು ಎಂದು ಹೇಳಿ ನಿನಗೆ ಮನಸ್ಸಿದ್ದಷ್ಟು ಮಾಂಸವನ್ನು ತಿನ್ನಬಹುದು;

ಧರ್ಮೋಪದೇಶಕಾಂಡ 22:22 ಒಬ್ಬ ಮನುಷ್ಯನು ಮುತ್ತೈದೆಯ ಸಂಗಡ ಮಲಗಿ ಕೊಂಡವನಾಗಿ ಸಿಕ್ಕಿದರೆ ಆ ಸ್ತ್ರೀಯ ಸಂಗಡ ಮಲಗಿ ಕೊಂಡ ಮನುಷ್ಯನೂ ಆ ಸ್ತ್ರೀಯೂ ಅವರಿಬ್ಬರೂ ಸಾಯಬೇಕು; ಹೀಗೆ ಕೆಟ್ಟದ್ದನ್ನು ಇಸ್ರಾಯೇಲಿನಿಂದ ತೆಗೆದುಹಾಕಬೇಕು.

ಯೆಹೋಶುವ 7:21 ಏನಂದರೆ, ನಾನು ಕೊಳ್ಳೆಯಲ್ಲಿ ಬಾಬೆಲಿನ ಒಂದು ಒಳ್ಳೇ ನಿಲುವಂಗಿಯನ್ನೂ ಇನ್ನೂರು ಬೆಳ್ಳಿ ಶೇಕೆಲುಗಳನ್ನೂ ಐವತ್ತು ಶೇಕೆಲ್ ತೂಕವಾದ ಒಂದು ಬಂಗಾರದ ಗಟ್ಟಿಯನ್ನೂ ಕಂಡು ಅವುಗಳನ್ನು ಆಶಿಸಿ ತೆಗೆದುಕೊಂಡೆನು; ಇಗೋ, ಅವುಗಳನ್ನು ನನ್ನ ಗುಡಾರದ ಮಧ್ಯದಲ್ಲಿ ನೆಲದೊಳಗೆ ಬಚ್ಚಿಟ್ಟಿದ್ದೇನೆ; ಬೆಳ್ಳಿಯೂ ಅದರ ಕೆಳಗೆ ಇದೆ ಅಂದನು.

ಕೀರ್ತನೆಗಳು 10:3 ದುಷ್ಟನು ತನ್ನ ಹೃದಯದ ಆಶೆಗೋಸ್ಕರ ಹೊಗಳಿಕೊಳ್ಳುತ್ತಾನೆ; ಕರ್ತನು ಅಸಹ್ಯಪಡುವ ಲೋಭಿಯನ್ನು ಅವನು ಆಶೀರ್ವದಿಸುತ್ತಾನೆ.

ಕೀರ್ತನೆಗಳು 78:18,30 ದೇವರನ್ನು ತಮ್ಮ ಹೃದಯದಲ್ಲಿ ಶೋಧಿಸು ವವರಾಗಿ ತಮ್ಮ ದುರಾಶೆಗಳಿಗೋಸ್ಕರ ಆಹಾರವನ್ನು ಕೇಳಿದರು. 30 ಅವರು ತಮ್ಮ ಆಶೆಯನ್ನು ಬಿಡದೆ ಅವರ ಊಟವು ಇನ್ನೂ ಅವರ ಬಾಯಿಯಲ್ಲಿ ಇರುವಾಗ

ಕೀರ್ತನೆಗಳು 81:12 ಆದದರಿಂದ ಅವರ ಹೃದಯದ ದುರಾಶೆಗೆ ಅವರನ್ನು ನಾನು ಒಪ್ಪಿಸಿದೆನು; ಅವರು ತಮ್ಮ ಆಲೋಚನೆಗಳಲ್ಲಿ ನಡೆದುಕೊಂಡರು.

ಕೀರ್ತನೆಗಳು 106:14 ಅರಣ್ಯದಲ್ಲಿ ದುರಾಶೆಯಿಂದ ಆಶಿಸಿ ಮರುಭೂಮಿ ಯಲ್ಲಿ ದೇವರನ್ನು ಪರೀಕ್ಷಿಸಿದರು.

ಕೀರ್ತನೆಗಳು 119:36 ಲೋಭದ ಕಡೆಗಲ್ಲ, ನಿನ್ನ ಸಾಕ್ಷಿಗಳ ಕಡೆಗೆ ನನ್ನ ಹೃದಯವನ್ನು ತಿರುಗಿಸು.

ಜ್ಞಾನೋಕ್ತಿಗಳು 1:19 ತಮ್ಮ ಸ್ವಂತ ಪ್ರಾಣಗಳನ್ನು ತೆಗೆದುಕೊಳ್ಳುವ ದುರ್ಲಾಭಾ

ಪೇಕ್ಷಕರ ಪ್ರತಿಯೊಬ್ಬನ ಮಾರ್ಗಗಳು ಹೀಗಿವೆ.

ಜ್ಞಾನೋಕ್ತಿಗಳು 6:25 ನಿನ್ನ ಹೃದಯದಲ್ಲಿ ಅವಳ ಸೌಂದರ್ಯವನ್ನು ಮೋಹಿಸಬೇಡ; ಇದಲ್ಲದೆ ಅವಳ ಕಣ್ಣುರೆಪ್ಪೆಗಳಿಂದ ನಿನ್ನನ್ನು ಅವಳು ವಶಮಾಡಿಕೊಳ್ಳದೆ ಇರಲಿ.

ಜ್ಞಾನೋಕ್ತಿಗಳು 15:27 ದುರ್ಲಾಭಾಪೇಕ್ಷಕನು ತನ್ನ ಮನೆಯನ್ನು ಬಾಧಿಸುತ್ತಾನೆ; ಲಂಚವನ್ನು ಹಗೆಮಾಡುವ ವನು ಬದುಕುವನು.

ಜ್ಞಾನೋಕ್ತಿಗಳು 21:25,26 ಸೋಮಾರಿಯ ಆಶೆಯು ಅವನನ್ನು ಕೊಲ್ಲುತ್ತವೆ. ಅವನ ಕೈಗಳು ದುಡಿಯುವದಕ್ಕೆ ನಿರಾಕರಿಸುತ್ತವೆ. 26 ದಿನವೆಲ್ಲಾ ಅವನು ದುರಾಶೆಯಿಂದ ಆಶಿಸುತ್ತಾನೆ; ಆದರೆ ನೀತಿವಂತನು ಹಿಂತೆಗೆಯದೇ ಕೊಡುತ್ತಾನೆ.

ಜ್ಞಾನೋಕ್ತಿಗಳು 28:16 ವಿವೇಕ ಶೂನ್ಯನಾದ ಒಡೆಯನು ಮಹಾಹಿಂಸಕನು; ಲೋಭತನವನ್ನು ಹಗೆಮಾಡುವವನು ತನ್ನ ದಿನಗಳನ್ನು ದೀರ್ಘಮಾಡುತ್ತಾನೆ.

ಯೆಶಾಯ 56:11 ಹೌದು, ಎಂದಿಗೂ ಸಾಕೆನ್ನದ ಹೊಟ್ಟೇಬಾಕ ನಾಯಿಗಳು, ಅವರು ಗ್ರಹಿಕೆಯಿಲ್ಲದ ಕುರುಬರು; ಅವರೆಲ್ಲರು ತಮ್ಮ ತಮ್ಮ ಸ್ವಂತ ಮಾರ್ಗಕ್ಕೂ ಪ್ರತಿಯೊಬ್ಬನು ತನಗೆ ಲಾಭ ಸಿಕ್ಕುವ ಕಡೆಗೂ ತಿರುಗಿ ಕೊಳ್ಳುವನು.

ಯೆಶಾಯ 57:17 ಅವನ ದುರಾಶೆಯ ಅನ್ಯಾಯಕ್ಕೆ ನಾನು ಕೋಪ ಗೊಂಡು ಅವನನ್ನು ಹೊಡೆದೆನು. ನನ್ನ ಮುಖವನ್ನು ಮುಚ್ಚಿಕೊಂಡು ರೋಷಭರಿತ ನಾದೆನು; ಅವನು ಮೊಂಡತನದಿಂದ ತನ್ನ ಮನಸ್ಸಿಗೆ ಬಂದ ಹಾಗೆಯೇ ನಡೆಯುತ್ತಾ ಬಂದಿದ್ದಾನೆ.

ಯೆರೆಮಿಯ 6:13 ಅವ ರಲ್ಲಿ ಚಿಕ್ಕವನು ಮೊದಲುಗೊಂಡು ದೊಡ್ಡವರ ವರೆಗೆ ಅವರೆಲ್ಲರೂ ತಮ್ಮನ್ನು ಲೋಭಕ್ಕೆ ಒಪ್ಪಿಸಿ ಕೊಟ್ಟಿದ್ದಾರೆ. ಪ್ರವಾದಿ ಮೊದಲುಗೊಂಡು ಯಾಜಕರ ವರೆಗೆ ಪ್ರತಿ ಯೊಬ್ಬನು ಸುಳ್ಳಾಗಿ ನಡಕೊಳ್ಳುತ್ತಾನೆ.

ಯೆರೆಮಿಯ 22:17 ಆದರೆ ನಿನ್ನ ಕಣ್ಣುಗಳು ನಿನ್ನ ಹೃದಯವು ನಿನ್ನ ದುರ್ಲಾಭದ ಮೇಲೆ, ಅಪರಾಧವಿಲ್ಲದವನ ರಕ್ತ ಚೆಲ್ಲುವದರ ಮೇಲೆ ಮತ್ತು ಪೀಡೆಯನ್ನೂ ಬಲಾತ್ಕಾರವನ್ನೂ ಮಾಡುವದರ ಮೇಲೆಯೇ ಹೊರತು ಮತ್ತಾವದರ ಮೇಲೆಯೂ ಇರುವದಿಲ್ಲ.

ಯೆರೆಮಿಯ 51:13 ಅನೇಕ ನೀರುಗಳ ಬಳಿಯಲ್ಲಿ ವಾಸವಾಗಿರುವವಳೇ, ಬಹಳ ದ್ರವ್ಯಗಳುಳ್ಳ ವಳೇ, ನಿನ್ನ ಅಂತ್ಯವೂ ನಿನ್ನ ದುರ್ಲಾಭದ ಅಳತೆಯೂ ಬಂತು.

ಯೆಹೆಜ್ಕೇಲನು 6:9 ನಿಮ್ಮಲ್ಲಿ ತಪ್ಪಿಸಿಕೊಂಡವರು ತಾವು ಸೆರೆಗೆ ಒಯ್ಯಲ್ಪ ಡುವ ಜನಾಂಗಗಳಲ್ಲಿ ನನ್ನನ್ನು ಜ್ಞಾಪಕಮಾಡಿಕೊಳ್ಳು ವರು, ಯಾಕಂದರೆ ನನ್ನನ್ನು ಬಿಟ್ಟುಬಿಡುವ ಅವರ ಜಾರಹೃದಯದಿಂದಲೂ ಅವರ ದೇವರ ವಿಗ್ರಹಗಳ ಹಿಂದೆ ಜಾರತ್ವ ಮಾಡುವವರ ಕಣ್ಣುಗಳಿಂದಲೂ ಮುರಿದುಹೋದೆನು; ಅವರು ತಮ್ಮ ಅಸಹ್ಯಗಳಲ್ಲಿ ಮಾಡುವ ಕೇಡುಗಳ ನಿಮಿತ್ತ ತಮಗೆ ತಾವೇ ಹೇಸಿ ಕೊಳ್ಳುವರು.

ಯೆಹೆಜ್ಕೇಲನು 14:4,5 ಆದದರಿಂದ ನೀನು ಅವರ ಸಂಗಡ ಮಾತನಾಡಿ ಹೇಳಬೇಕಾದದ್ದೇನಂದರೆ --ದೇವರಾದ ಕರ್ತನು ಹೀಗೆ ಹೇಳುತ್ತಾನೆ--ಇಸ್ರಾ ಯೇಲಿನ ಮನೆತನದವರ ಪ್ರತಿಯೊಬ್ಬನೂ ತಮ್ಮ ವಿಗ್ರಹಗಳನ್ನು ಹೃದಯಗಳಲ್ಲಿ ನೆಲೆಗೊಳಿಸಿ ಅಕ್ರಮದ ಎಡೆತಡೆಗಳನ್ನು ತಮ್ಮ ಮುಂದೆ ಇಟ್ಟುಕೊಂಡು ಪ್ರವಾ ದಿಯ ಬಳಿಗೆ ಬರುವ ಮನುಷ್ಯನು ಯಾವನೋ ಅವನಿಗೆ ಕರ್ತನಾದ ನಾನು ಅವರ ವಿಗ್ರಹಗಳ ಸಮೂ ಹಕ್ಕೆ ತಕ್ಕ ಹಾಗೆ ಉತ್ತರ ಕೊಡುತ್ತೇನೆ. 5 ಹೀಗೆ ನಾನು ಇಸ್ರಾಯೇಲಿನ ಮನೆತನ ದವರನ್ನು ಅವರ ಸ್ವಂತ ಹೃದಯದಿಂದಲೇ ಸಿಕ್ಕಿಸಿ ಹಿಡಿಯುತ್ತೇನೆ. ಯಾಕಂದರೆ ಅವರೆಲ್ಲರೂ ತಮ್ಮ ವಿಗ್ರಹಗಳ ಮುಖಾಂತರ ನನಗೆ ಅನ್ಯರಾದರು.

ಯೆಹೆಜ್ಕೇಲನು 22:12 ನಿನ್ನಲ್ಲಿ ರಕ್ತ ಚೆಲ್ಲುವ ಹಾಗೆ ಲಂಚತಿಂದಿದ್ದಾರೆ; ಬಡ್ಡಿಯನ್ನೂ ಲಾಭವನ್ನೂ ತೆಗೆದುಕೊಂಡಿದ್ದಾರೆ; ಬಲಾತ್ಕಾರದಿಂದ ನಿನ್ನ ನೆರೆಯವರಲ್ಲಿ ದುರ್ಲಾಭಮಾಡಿಕೊಂಡಿದ್ದಾರೆ; ನನ್ನನ್ನು ಮರೆತುಬಿಟ್ಟಿ ದ್ದಾರೆಂದು ದೇವರಾದ ಕರ್ತನು ಹೇಳುತ್ತಾನೆ.

ಯೆಹೆಜ್ಕೇಲನು 33:31 ಬೇರೆ ಜನರು ಬರುವ ಹಾಗೆ ಅವರು ನಿನ್ನ ಬಳಿಗೆ ಬಂದು ಜನರು ಕುಳಿತುಕೊಳ್ಳುವ ಹಾಗೆ ನಿನ್ನ ಮುಂದೆ ಕುಳಿತುಕೊಳ್ಳುವರು; ಅವರು ನಿನ್ನ ವಾಕ್ಯಗಳನ್ನು ಕೇಳುವರು, ಆದರೆ ಅವರು ಅವುಗಳನ್ನು ಮಾಡುವದಿಲ್ಲ. ಅವರು

ತಮ್ಮ ಬಾಯಿಂದ ಹೆಚ್ಚಾದ ಪ್ರೀತಿಯನ್ನು ತೋರಿಸುವರು; ಆದರೆ ಅವರ ಹೃದಯವು ಲೋಭತ್ವದ ಕಡೆಗೆ ಹೋಗುವದು.

ಹೋಶೇ 4:12 ನನ್ನ ಜನರು ಮರದ ತುಂಡುಗಳಿಗೆ ಆಲೋಚನೆ ಕೇಳುತ್ತಾರೆ; ಅವರ ಕೋಲು ಅವರಿಗೆ ತಿಳಿಸುತ್ತದೆ. ವ್ಯಭಿಚಾರದ ಆತ್ಮಗಳು ಅವರನ್ನು ತಪ್ಪಿಸಿಬಿಟ್ಟಿದೆ; ಅವರು ತಮ್ಮ ದೇವರ ಕೈಕೆಳಗಿರದೆ ವ್ಯಭಿಚಾರ ಮಾಡಿದ್ದಾರೆ.

ಹೋಶೇ 5:4 ಅವರು ತಮ್ಮ ದೇವರ ಬಳಿಗೆ ತಿರುಗಿಕೊಳ್ಳುವ ಹಾಗೆ ತಮ್ಮ ಕ್ರಿಯೆಗಳನ್ನು ಸರಿ ಮಾಡುವದಿಲ್ಲ; ಯಾಕಂದರೆ ವ್ಯಭಿಚಾರಗಳ ಆತ್ಮವು ಅವರ ಮಧ್ಯದಲ್ಲಿ ಉಂಟು; ಅವರು ಕರ್ತನನ್ನು ತಿಳಿದುಕೊಳ್ಳಲಿಲ್ಲ.

ಮಿಕ 2:2 ಅವರು ಹೊಲಗಳನ್ನು ಆಶಿಸಿ ಬಲಾತ್ಕಾರದಿಂದ ತಕ್ಕೊಳ್ಳುತ್ತಾರೆ; ಮನೆಗಳನ್ನು ಸಹ ತೆಗೆದುಕೊಳ್ಳುತ್ತಾರೆ; ಮನುಷ್ಯನಿಗೂ ಅವನ ಮನೆಗೂ ಹೌದು, ಮನುಷ್ಯನಿಗೂ ಅವನ ಸ್ವಾಸ್ತ್ಯಕ್ಕೂ ಬಲಾತ್ಕಾರ ಮಾಡುತ್ತಾರೆ.

ನಹೂಮ 3:4 ಸೌಂದರ್ಯವುಳ್ಳ ಮಾಟಗಾರ್ತಿಯಾದ ಸೂಳೆಯ ಸೂಳೆತನಗಳು ಬಹಳ; ಅವಳು ತನ್ನ ಸೂಳೆತನಗಳಿಂದ ಜನಾಂಗಗಳನ್ನೂ ತನ್ನ ಮಾಟಗಳಿಂದ ಗೋತ್ರಗಳನ್ನೂ ಮಾರಿದಳಲ್ಲಾ?

ಹಬಕ್ಕೂಕ್ಕ 2:9 ತನ್ನ ಗೂಡನ್ನು ಉನ್ನತದಲ್ಲಿ ಇಡುವ ಹಾಗೆಯೂ ಕೇಡಿನ ಕೈಗೆ ತಪ್ಪಿಸಿಕೊಳ್ಳುವ ಹಾಗೆಯೂ ತನ್ನ ಮನೆ ಗೋಸ್ಕರ ದುರ್ಲಾಭವನ್ನು ಆಶಿಸುವವನಿಗೆ ಅಯ್ಯೋ!

ಮತ್ತಾಯನು 5:28 ಆದರೆ ನಾನು ನಿಮಗೆ ಹೇಳುವದೇನಂದರೆ--ಒಬ್ಬ ಸ್ತ್ರೀಯನ್ನು ಮೋಹಿಸುವದಕ್ಕೆ ನೋಡುವ ಪ್ರತಿಯೊಬ್ಬನು ಆಗಲೇ ತನ್ನ ಹೃದಯದಲ್ಲಿ ಆಕೆಯ ಕೂಡ ವ್ಯಭಿಚಾರ ಮಾಡಿದ್ದಾನೆ.

ಮಾರ್ಕನು 4:19 ಈ ಲೋಕದ ಚಿಂತೆಗಳೂ ಐಶ್ವರ್ಯದ ಮೋಸವೂ ಇತರ ವಿಷಯಗಳ ಆಶೆಗಳೂ ಒಳಗೆ ಸೇರಿ ವಾಕ್ಯವನ್ನು ಅಡಗಿಸುವದರಿಂದ ಅದು ನಿಷ್ಫಲವಾಗುವದು.

ಮಾರ್ಕನು 7:22 ಕಳ್ಳತನಗಳು ದುರಾಶೆ ಕೆಟ್ಟತನ ಮೋಸ ಕಾಮಾಭಿಲಾಷೆ ಕೆಟ್ಟದೃಷಿ ದೇವದೂಷಣೆ ಗರ್ವ ಬುದ್ಧಿಗೇಡಿತನ

ಲೂಕನು 3:14 ಅದರಂತೆಯೇ ಸೈನಿ ಕರು--ನಾವೇನು ಮಾಡತಕ್ಕದ್ದು ಎಂದು ಕೇಳಿದ್ದಕ್ಕೆ ಅವನು ಅವರಿಗೆ--ಯಾರನ್ನೂ ಹಿಂಸಿಸಬೇಡಿರಿ; ಇಲ್ಲವೆ ಯಾರ ಮೇಲೆಯೂ ಸುಳ್ಳಾಗಿ ದೂರು ಹೇಳಬೇಡಿರಿ; ನಿಮ್ಮ ಸಂಬಳದಲ್ಲಿ ತೃಪ್ತರಾಗಿರ್ರಿ ಎಂದು ಹೇಳಿದನು.

ಲೂಕನು 12:15 ಇದಲ್ಲದೆ ಆತನು ಅವರಿಗೆ--ಜಾಗ್ರತೆ ಯಾಗಿದ್ದು ಲೋಭಕ್ಕೆ ಎಚ್ಚರಿಕೆಯಾಗಿರ್ರಿ; ಯಾಕಂದರೆ ಒಬ್ಬ ಮನುಷ್ಯನಿಗೆ ಸಮೃದ್ಧಿಯಾದ ಆಸ್ತಿಯು ಅವನಿಗೆ ಜೀವಾಧಾರವಲ್ಲ ಅಂದನು.

ಲೂಕನು 16:14 ಆಗ ಲೋಭಿ ಗಳಾದ ಫರಿಸಾಯರು ಸಹ ಇವೆಲ್ಲವುಗಳನ್ನು ಕೇಳಿ ಆತನಿಗೆ ಪರಿಹಾಸ್ಯ ಮಾಡಿದರು.

ಯೋಹಾನನು 8:44 ನೀವು ನಿಮ್ಮ ತಂದೆಯಾದ ಸೈತಾನನಿಗೆ ಸಂಬಂಧಪಟ್ಟವರಾಗಿದ್ದೀರಿ. ನಿಮ್ಮ ತಂದೆಯ ದುರಾಶೆಗಳನ್ನೇ ನೀವು ಮಾಡುವದಕ್ಕೆ ಇಚ್ಛೈಸುತ್ತೀರಿ; ಅವನು ಆದಿಯಿಂದಲೂ ಕೊಲೆಗಾರನಾಗಿದ್ದು ಸತ್ಯ ದಲ್ಲಿ ನಿಲ್ಲಲಿಲ್ಲ. ಯಾಕಂದರೆ ಅವನಲ್ಲಿ ಸತ್ಯವೇ ಇಲ್ಲ; ಅವನು ಸುಳ್ಳಾಡುವಾಗ ತನ್ನ ಸ್ವಂತವಾದವುಗಳಿಂದ ಮಾ

ಅಪೊಸ್ತಲರ ಕೃತ್ಯಗ 20:33 ನಾನು ಯಾರ ಬೆಳ್ಳಿಯನ್ನಾಗಲಿ ಇಲ್ಲವೆ ಭಂಗಾರವನ್ನಾಗಲಿ ಇಲ್ಲವೆ ವಸ್ತ್ರವನ್ನಾಗಲಿ ಬಯಸಲಿಲ್ಲ.

ರೋಮಾಪುರದವರಿಗೆ 1:24-29 ಆದಕಾರಣ ತಮ್ಮ ಹೃದಯಗಳ ದುರಾಶೆಗಳ ಮೂಲಕ ತಮ್ಮ ಸ್ವಂತ ದೇಹಗಳನ್ನು ತಮ್ಮೊಳಗೆ ಅವ ಮಾನಪಡಿಸಿಕೊಳ್ಳುವಂತೆ ದೇವರು ಅವರನ್ನು ಅಶುದ್ಧ ತನಕ್ಕೆ ಒಪ್ಪಿಸಿದನು; 25 ಅವರು ದೇವರ ವಿಷಯವಾದ ಸತ್ಯವನ್ನು ಸುಳ್ಳಿಗೆ ಬದಲಾಯಿಸಿ ಸೃಷ್ಟಿಕರ್ತನಿಗಿಂತ ಹೆಚ್ಚಾಗಿ ಸೃಷ್ಟಿಯನ್ನೇ ಆರಾಧಿಸಿ ಸೇವಿಸಿದರು; ಆತನು (ಸೃಷ್ಟಿಕರ್ತನು) ಎಂದೆಂದಿಗೂ ಸ್ತುತಿ

ಹೊಂದತಕ್ಕವನು. ಆಮೆನ್. 26 ಈ ಕಾರಣದಿಂದ ದೇವರು ಅವರನ್ನು ತುಚ್ಛ ವಾದ ಮನೋಭಾವಗಳಿಗೆ ಒಪ್ಪಿಸಿಬಿಟ್ಟನು. ಹೇಗೆಂದರೆ ಅವರ ಹೆಂಗಸರು ಸಹ ಸ್ವಾಭಾವಿಕವಾದ ಭೋಗ ವನ್ನು ಸ್ವಭಾವ ವಿರುದ್ಧವಾದ ಭೋಗಕ್ಕೆ ಮಾರ್ಪಡಿಸಿದರು. 27 ಅದರಂತೆ ಗಂಡಸರೂ ಸ್ವಾಭಾವಿಕ ಸ್ತ್ರೀ ಭೋಗವನ್ನು ಬಿಟ್ಟು ಒಬ್ಬರಮೇಲೊಬ್ಬರು ತಮ್ಮ ಕಾಮಾತುರದಿಂದ ತಾಪಪಡುತ್ತಾ ಗಂಡಸರ ಸಂಗಡ ಗಂಡಸರು ಅಯೋಗ್ಯವಾದದ್ದನ್ನು ಮಾಡುತ್ತಾ ತಮ್ಮ ತಪ್ಪಿಗೆ ತಕ್ಕ ಪ್ರತಿಫಲವನ್ನು ತಮ್ಮಲ್ಲಿ ಹೊಂದಿದರು. 28 ಇದಲ್ಲದೆ ಅವರು ತಮ್ಮ ತಿಳುವಳಿಕೆಯಿಂದ ದೇವರನ್ನು ಸ್ಮರಿಸುವದಕ್ಕೆ ಮನಸ್ಸಿಲ್ಲದ ಕಾರಣ ದೇವರು ಅವರನ್ನು ಮಾಡಬಾರದವುಗಳನ್ನು ಮಾಡು ವಂತೆ ಅನಿಷ್ಟಭಾವಕ್ಕೆ ಒಪ್ಪಿಸಿದನು. 29 ಹೀಗೆ ಅವರು ಸಕಲ ಅನೀತಿಯಿಂದಲೂ ಜಾರತ್ವ ದುರ್ಮಾರ್ಗತನ ದುರಾಶೆ ದುಷ್ಟತ್ವ ಇವುಗಳಿಂದಲೂ ತುಂಬಿದವರಾಗಿ ಹೊಟ್ಟೇಕಿಚ್ಚು ಕೊಲೆ ವಿವಾದ ಮೋಸ ತುಂಬಿದವರೂ ಅತಿಉಗ್ರತೆಯಿಂದ ತುಂಬಿದವರೂ ಪಿಸುಗುಟ್ಟುವ ವರೂ

ರೋಮಾಪುರದವರಿಗೆ 6:12 ಹೀಗಿರುವದರಿಂದ ಸಾಯತಕ್ಕ ನಿಮ್ಮ ದೇಹದ ಮೇಲೆ ಪಾಪವನ್ನು ಆಳಗೊಡಿಸಿ ನೀವು ಅದರ ದುರಾಶೆಗಳಿಗೆ ಒಳಪಡಬೇಡಿರಿ;

ರೋಮಾಪುರದವರಿಗೆ 7:7 ಹಾಗಾದರೆ ನಾವು ಏನು ಹೇಳೋಣ? ನ್ಯಾಯ ಪ್ರಮಾಣವು ಪಾಪವೋ? ಹಾಗೆ ಎಂದಿಗೂ ಅಲ್ಲ; ನ್ಯಾಯಪ್ರಮಾಣದಿಂದಲೇ ಹೊರತು ಪಾಪವೆಂಬದು ಏನೋ ನನಗೆ ಗೊತ್ತಿರಲಿಲ್ಲ. ಯಾಕಂದರೆ--ನೀನು ಆಶಿಸಬಾರದು ಎಂದು ನ್ಯಾಯಪ್ರಮಾಣವು ಹೇಳ ದಿದ್ದರೆ ದುರಾಶೆಯೆಂದರೆ ಏನೋ ನನಗೆ ತಿಳಿಯು ತ್ತಿರಲಿಲ್ಲ.

ರೋಮಾಪುರದವರಿಗೆ 13:9 ಹೇಗಂದರೆ ವ್ಯಭಿಚಾರ ಮಾಡಬಾರದು, ನರಹತ್ಯ ಮಾಡಬಾರದು, ಕದಿಯಬಾರದು, ಸುಳ್ಳುಸಾಕ್ಷಿ ಹೇಳ ಬಾರದು, ಆಶಿಸಬಾರದು ಈ ಮೊದಲಾದ ಎಲ್ಲಾ ಕಟ್ಟಳೆಗಳು--ನಿನ್ನ ನೆರೆಯವನನ್ನು ನಿನ್ನಂತೆಯೇ ಪ್ರೀತಿಸಬೇಕು ಎಂಬ ಒಂದೇ ಮಾತಿನಲ್ಲಿ ಅಡಕವಾಗಿವೆ.

ರೋಮಾಪುರದವರಿಗೆ 13:14 ನೀವು ದೇಹದ ಆಶೆಗಳನ್ನು ಪೂರೈಸುವದಕ್ಕಾಗಿ ಚಿಂತಿಸದೆ ಕರ್ತನಾದ ಯೇಸು ಕ್ರಿಸ್ತನನ್ನು ಧರಿಸಿಕೊಳ್ಳಿರಿ.

1 ಕೊರಿಂಥದವರಿಗೆ 5:10,11 ಈ ಲೋಕದಲ್ಲಿರುವ ಜಾರರು, ಲೋಭಿಗಳು, ಸುಲು ಕೊಳ್ಳುವವರು, ವಿಗ್ರಹಾರಾಧಕರು ಇವರನ್ನು ಬಿಟ್ಟು ಬಿಡಬೇಕೆಂದು ನನ್ನ ತಾತ್ಪರ್ಯವಲ್ಲ; ಹಾಗೆ ಬಿಡ ಬೇಕಾದರೆ ನೀವು ಈ ಲೋಕವನ್ನೇ ಬಿಟ್ಟು ಹೋಗ ಬೇಕಾಗುವದು. 11 ಆದರೆ ಸಹೋದರ ನೆನಿಸಿಕೊಂಡ ವನು ಜಾರನಾದರೂ ಲೋಭಿಯಾದರೂ ವಿಗ್ರಹಾ ರಾಧಕನಾದರೂ ಬೈಯುವವನಾದರೂ ಕುಡುಕ ನಾದರೂ ಸುಲುಕೊಳ್ಳುವವನಾದರೂ ಆಗಿದ್ದ ಪಕ್ಷದಲ್ಲಿ ಅಂಥವನ ಸಹವಾಸ ಮಾಡಬಾರದು, ಅಂಥವನ ಸಂಗಡ ಊಟ ಮಾಡಲೂಬಾರದು ಎಂದು ನಾನು ಈಗ ಬರೆದಿದ್ದೇನೆ.

1 ಕೊರಿಂಥದವರಿಗೆ 6:9,10 ಅನೀತಿವಂತರು ದೇವರ ರಾಜ್ಯಕ್ಕೆ ಬಾಧ್ಯರಾಗುವದಿಲ್ಲವೆಂಬದು ನಿಮಗೆ ತಿಳಿಯದೋ? ಮೋಸಹೋಗಬೇಡಿರಿ; ಜಾರರು ವಿಗ್ರಹಾರಾಧಕರು ವ್ಯಭಿಚಾರಿಗಳು ವಿಟರು ಪುರುಷಗಾಮಿಗಳು 10 ಕಳ್ಳರು ಲೋಭಿಗಳು ಕುಡುಕರು ಬೈಯುವವರು ಸುಲು ಕೊಳ್ಳುವವರು ದೇವರ ರಾಜ್ಯಕ್ಕೆ ಬಾಧ್ಯರಾಗುವದಿಲ್ಲ.

1 ಕೊರಿಂಥದವರಿಗೆ 10:6 ಅವರು ಕೆಟ್ಟವಿಷಯಗಳನ್ನು ಆಶಿಸಿದಂತೆ ನಾವು ಆಶಿಸುವವರಾಗಬಾರದೆಂಬದಕ್ಕಾಗಿ ಈ ಸಂಗತಿ ಗಳು ನಮಗೆ ನಿದರ್ಶನಗಳಾಗಿವೆ.

1 ಕೊರಿಂಥದವರಿಗೆ 12:31 ಆದರೆ ಶ್ರೇಷ್ಠ ವರಗಳನ್ನು ಆಸಕ್ತಿಯಿಂದ ಅಪೇಕ್ಷಿಸಿರಿ. ಆದಾಗ್ಯೂ ನಾನು ನಿಮಗೆ ಉತ್ಕೃಷ್ಟವಾದ ಮಾರ್ಗವನ್ನು ತೋರಿಸುತ್ತೇನೆ.

1 ಕೊರಿಂಥದವರಿಗೆ 14:39 ಆದಕಾರಣ ಸಹೋದರರೇ, ಪ್ರವಾದಿಸುವದನ್ನು ಆಶಿಸಿರಿ. ಮತ್ತು ಭಾಷೆಗಳನ್ನಾಡುವದಕ್ಕೆ ಅಡ್ಡಿಮಾಡ ಬೇಡಿರಿ.

2 ಕೊರಿಂಥದವರಿಗೆ 9:5 ಹೀಗಿರಲಾಗಿ ನೀವು ಕೊಡುತ್ತೇವೆಂದು ಮೊದಲು ಹೇಳಿದ ಔದಾರ್ಯ ದ್ರವ್ಯವನ್ನು ಸಿದ್ಧಪಡಿಸಬೇಕೆಂದು ಈ ಸಹೋದರರು ಮುಂದಾಗಿ ನಿಮ್ಮ

ಬಳಿಗೆ ಬಂದು ಅವರನ್ನು ಪ್ರೋತ್ಸಾಹಿಸುವದು ಅವಶ್ಯವೆಂದು ನನಗೆ ತೋಚಿತು, ಹೀಗೆ ಅದು ಸಂಕೋಚದಿಂದ ಬಾರದೆ ಔದಾರ್ಯವಾಗಿಯೇ ಸಿದ್ಧವಾಗುವದು.

ಗಲಾತ್ಯದವರಿಗೆ 5:16-20 ನಾನು ಹೇಳುವದೇನಂದರೆ, ಆತ್ಮನನ್ನು ಅನು ಸರಿಸಿ ನಡೆದುಕೊಳ್ಳಿರಿ; ಆಗ ನೀವು ಶರೀರಭಾವದ ಅಭಿಲಾಷೆಯನ್ನು ಎಷ್ಟು ಮಾತ್ರಕ್ಕೂ ನೆರವೇರಿಸು ವದಿಲ್ಲ. 17 ಶರೀರದಾಶೆಯು ಆತ್ಮನಿಗೆ ವಿರುದ್ಧ ವಾಗಿದೆ. ಆತ್ಮನು ಶರೀರಕ್ಕೆ ವಿರುದ್ಧವಾಗಿದ್ದಾನೆ. ನೀವು ಮಾಡಲಿಚ್ಛೆಸುವದನ್ನು ಮಾಡದಂತೆ ಇವು ಒಂದ ಕ್ಕೊಂದು ವಿರೋಧವಾಗಿವೆ. 18 ಆದರೆ ನೀವು ಆತ್ಮನಿಂದ ನಡಿಸಿಕೊಳ್ಳುವವರಾದರೆ ನ್ಯಾಯಪ್ರಮಾ ಣಕ್ಕೆ ಅಧೀನರಲ್ಲ. 19 ಶರೀರದ ಕೃತ್ಯಗಳು ಸ್ಪಷ್ಟವಾಗಿ ತೋರಿಬಂದಿವೆ; ಅವು ಯಾವವೆಂದರೆ--ವ್ಯಭಿಚಾರ ಜಾರತ್ವ ಅಶುದ್ಧತ್ವ ಬಂಡುತನ 20 ವಿಗ್ರಹಾರಾಧನೆ ಮಾಟ ಹಗೆತನ ಮತಭೇದ ಹೊಟ್ಟೇಕಿಚ್ಚು ಸಿಟ್ಟು ಜಗಳ ಒಳಸಂಚು ಭಿನ್ನಾಭಿಪ್ರಾಯಗಳು

ಗಲಾತ್ಯದವರಿಗೆ 5:24 ಕ್ರಿಸ್ತನವರು ತಮ್ಮ ಶರೀರವನ್ನು ಅದರ ಇಚ್ಛೆ ದುರಾಶೆ ಸಹಿತವಾಗಿ ಶಿಲುಬೆಗೆ ಹಾಕಿದ್ದಾರೆ.

ಎಫೆಸದವರಿಗೆ 2:1-3 ಇದಲ್ಲದೆ ಅಪರಾಧಗಳ ಮತ್ತು ಪಾಪಗಳ ದೆಸೆಯಿಂದ ಸತ್ತವರಾಗಿದ್ದ ನಿಮ್ಮನ್ನು ಆತನು ಬದುಕಿಸಿದನು. 2 ನೀವು ಪೂರ್ವದಲ್ಲಿ ಅಪರಾಧ ಗಳನ್ನೂ ಪಾಪಗಳನ್ನೂ ಮಾಡುವವರಾಗಿದ್ದು ಇಹ ಲೋಕಾಚಾರಕ್ಕೆ ಅನುಸಾರವಾಗಿ ನಡೆದುಕೊಂಡಿರಿ; ವಾಯುಮಂಡಲದಲ್ಲಿ ಅಧಿಕಾರ ನಡಿಸುವ ಅಧಿಪತಿಗೆ ಅಂದರೆ ಅವಿಧೇಯತೆಯ ಮಕ್ಕಳಲ್ಲಿ ಈಗ ಕೆಲಸ ನಡಿಸುವ ಆತ್ಮನಿಗನುಸಾರವಾಗಿ ನಡೆದುಕೊಂಡಿರಿ; 3 ನಾವೆಲ್ಲರೂ ಪೂರ್ವದಲ್ಲಿ ಶರೀರಭಾವದ ಆಶೆಗಳಿಗೆ ಅಧೀನರಾಗಿ ಶರೀರಕ್ಕೂ ಮನಸ್ಸಿಗೂ ಸಂಬಂಧಪಟ್ಟ ಇಚ್ಛೆಗಳನ್ನು ನೆರವೇರಿಸುತ್ತಾ ನಡೆದು ಮಿಕ್ಕಾದವರಂತೆ ಸ್ವಭಾವ ಸಿದ್ಧವಾಗಿ ದೇವರ ಕೋಪದ ಮಕ್ಕಳಾಗಿದ್ದೆವು.

ಎಫೆಸದವರಿಗೆ 4:19 ಅವರು ತಮ್ಮ ದುಸ್ಥಿತಿಗಾಗಿ ಸ್ವಲ್ಪವೂ ಚಿಂತಿಸದೆ ತಮ್ಮನ್ನು ಬಂಡುತನಕ್ಕೆ ಒಪ್ಪಿಸಿಕೊಟ್ಟು ಎಲ್ಲಾ ವಿಧವಾದ ಅಶುದ್ಧ ಕೃತ್ಯಗಳನ್ನು ಅತ್ಯಾಶೆಯಿಂದ

ನಡಿಸುವವರಾಗಿದ್ದಾರೆ.

ಎಫೆಸದವರಿಗೆ 4:22-27 ಯೇಸುವಿನಲ್ಲಿರುವ ಸತ್ಯೋಪದೇಶವು ಯಾವದೆಂದರೆ-- ನೀವು ನಿಮ ಹಿಂದಿನ ನಡತೆಯನ್ನು ಅನುಸರಿಸದೆ ಪೂರ್ವಸ್ವಭಾವ ವನ್ನು ತೆಗೆದು ಹಾಕಿಬಿಡಬೇಕು; ಅದು ಮೋಸಕರವಾದ ದುರಾಶೆಗಳಿಂದ ಕೆಟ್ಟು ಹೋಗುವಂಥದು.
23 ನೀವು ನಿಮ್ಮ ಮನಸ್ಸಿನಭಾವದಲ್ಲಿ ಹೊಸಬರಾಗಿ ನೂತನ ಸ್ವಭಾವವನ್ನು ಧರಿಸಿಕೊಳ್ಳಿರಿ. 24 ಆ ಸ್ವಭಾವವು ದೇವರ ಹೋಲಿಕೆಯ ಮೇರೆಗೆ ನೀತಿಯಲ್ಲಿಯೂ ನಿಜವಾದ ಪರಿಶುದ್ಧತೆಯಲ್ಲಿಯೂ ನಿರ್ಮಿಸಲ್ಪಟ್ಟಿದೆ. 25 ಆದ ಕಾರಣ ಸುಳ್ಳಾಡುವದನ್ನು ಬಿಟ್ಟು ಪ್ರತಿಯೊಬ್ಬನು ತನ್ನ ನೆರೆಯವನ ಸಂಗಡ ಸತ್ಯವನ್ನೇ ಆಡಲಿ; ಯಾಕಂದರೆ ನಾವು ಒಬ್ಬರಿಗೊಬ್ಬರು ಅಂಗಗಳಾಗಿದ್ದೇವಲ್ಲಾ. 26 ಕೋಪಮಾಡಬೇಕಾದರೂ ಪಾಪ ಮಾಡಬೇಡಿರಿ; ಸೂರ್ಯನು ಮುಳುಗುವದಕ್ಕಿಂತ ಮುಂಚೆ ನಿಮ್ಮ ಸಿಟ್ಟು ತೀರಲಿ; 27 ಸೈತಾನನಿಗೆ ಅವಕಾಶ ಕೊಡಲೇಬೇಡಿರಿ.

ಎಫೆಸದವರಿಗೆ 5:3,5 ಆದರೆ ನಿಮ್ಮೊಳಗೆ ಜಾರತ್ವವಾಗಲಿ ಯಾವ ಅಶುದ್ಧತ್ವವಾಗಲಿ ಇಲ್ಲವೆ ಲೋಭವಾಗಲಿ ಪರಿಶುದ್ಧರಿಗೆ ತಕ್ಕ ಹಾಗೆ ಇವುಗಳ ಹೆಸರನ್ನು ಒಂದು ಸಲವಾದರೂ ಎತ್ತಬಾರದು. 5 ಯಾವ ಜಾರನಾಗಲಿ, ಅಶುದ್ಧನಾಗಲಿ, ವಿಗ್ರಹಾರಾಧಕನಂತಿರುವ ಲೋಭಿಯಾಗಲಿ ಕ್ರಿಸ್ತನ ಮತ್ತು ದೇವರ ರಾಜ್ಯದಲ್ಲಿ ಬಾಧ್ಯನಾಗುವದಿಲ್ಲವೆಂದು ನೀವು ಬಲ್ಲಿರಲ್ಲವೇ.

ಕೊಲೊಸ್ಸೆಯವರಿಗೆ 3:5 ಆದದರಿಂದ ನಿಮ್ಮಲ್ಲಿರುವ ಭೂಸಂಬಂಧವಾದ ಭಾವಗಳನ್ನು ಅಂದರೆ ಜಾರತ್ವ ಬಂಡುತನ ಕಾಮಾಭಿ ಲಾಷೆ ದುರಾಶೆ ವಿಗ್ರಹಾರಾಧನೆಯಾಗಿರುವ ಲೋಭ ಇವುಗಳನ್ನು ಸಾಯಿಸಿರಿ.

1 ಥೆಸಲೊನೀಕದವರಿಗೆ 2:5 ನಿಮಗೆ ತಿಳಿದಿ ರುವ ಪ್ರಕಾರ ನಾವು ಎಂದಿಗೂ ಮುಖಸ್ತುತಿಯನ್ನು ಮಾಡುವವರಾಗಿ ಕಾಣಬಂದಿಲ್ಲ. ದ್ರವ್ಯಾಶೆಯನ್ನು ಮರೆಮಾಡುವದಕ್ಕಾಗಿ ವೇಷವನ್ನು ಹಾಕಿಕೊಂಡವ ರಾಗಿಲ್ಲ; ಇದಕ್ಕೆ ದೇವರೇ ಸಾಕ್ಷಿ.

1 ಥೆಸಲೊನೀಕದವರಿಗೆ 4:3-7 ದೇವರ ಚಿತ್ತವೇನಂದರೆ, ನೀವು

ಶುದ್ಧರಾಗಿರಬೇಕೆಂಬದೇ; ಆದದರಿಂದ ಹಾದರಕ್ಕೆ ದೂರವಾಗಿರಬೇಕು. 4 ನಿಮ್ಮಲ್ಲಿ ಪ್ರತಿಯೊಬ್ಬನು ಪವಿತ್ರತೆಯಿಂದಲೂ ಘನತೆ ಯಿಂದಲೂ ತನ್ನ ದೇಹವನ್ನು ಕಾಪಾಡಿಕೊಳ್ಳಲು ತಿಳಿಯಬೇಕು. 5 ದೇವರನ್ನರಿಯದ ಅನ್ಯಜನಗಳಂತೆ ಕಾಮಾಭಿಲಾಷೆಗೆ ಒಳಪಡಬಾರದು. 6 ಈ ವಿಷಯದಲ್ಲಿ ಯಾರೂ ಅತಿಕ್ರಮಿಸಿ ತನ್ನ ಸಹೋದರನನ್ನು ವಂಚಿಸಬಾರದು; ನಾವು ಮುಂಚೆ ತಿಳಿಸಿ ನಿಮಗೆ ಖಂಡಿತವಾಗಿ ಹೇಳಿದ ಪ್ರಕಾರ ಇವೆಲ್ಲವುಗಳ ವಿಷಯದಲ್ಲಿ ಕರ್ತನು ಮುಯ್ಯಿಗೆ ಮುಯ್ಯಿ ತೀರಿಸುವ ವನಾಗಿದ್ದಾನೆ. 7 ದೇವರು ನಮ್ಮನ್ನು ಅಶುದ್ಧತೆಗೆ ಕರೆಯದೆ ಶುದ್ಧತೆಗೆ ಕರೆದನು.

1 ತಿಮೊಥೆಯನಿಗೆ 3:3,8 ಅವನು ಕುಡಿಯುವವನಾಗಿರಬಾರದು. ಹೊಡೆದಾಡುವವನಾಗಿರಬಾರದು, ದ್ರವ್ಯಾಶೆಯುಳ್ಳವ ನಾಗಿರಬಾರದು; ಆದರೆ ತಾಳ್ಮೆಯುಳ್ಳವನೂ ಕುತರ್ಕ ಮಾಡದವನೂ ದುರಾಶೆಯಿಲ್ಲದವನೂ ಆಗಿರಬೇಕು. 8 ಅದೇ ರೀತಿಯಾಗಿ ಸಭಾಸೇವಕರು ಗೌರವವುಳ್ಳ ವರಾಗಿರಬೇಕು; ಅವರು ಎರಡು ನಾಲಿಗೆಯುಳ್ಳವರಾಗಿ ರಬಾರದು. ಹೆಚ್ಚು ದ್ರಾಕ್ಷಾರಸ ಕುಡಿಯುವವರೂ ನೀಚಲಾಭವನ್ನು ಅಪೇಕ್ಷಿಸುವವರೂ ಆಗಿರದೆ

1 ತಿಮೊಥೆಯನಿಗೆ 6:9,10 ಆದರೆ ಐಶ್ವರ್ಯವಂತರಾಗ ಬೇಕೆಂದು ಮನಸ್ಸು ಮಾಡುವವರು ಶೋಧನೆಯಲ್ಲಿಯೂ ಉರ್ಲಿನಲ್ಲಿಯೂ ಸಿಕ್ಕಿಕೊಂಡು ಅನೇಕ ಬುದ್ಧಿಹೀನತೆಯ ಮತ್ತು ಹಾನಿಕರವಾದ ದುರಾಶೆಗಳಲ್ಲಿ ಬೀಳುತ್ತಾರೆ. ಇಂಥ ಆಶೆಗಳು ಮನುಷ್ಯರನ್ನು ಸಂಹಾರ ನಾಶನಗಳಲ್ಲಿ ಮುಳುಗಿಸುತ್ತವೆ. 10 ಹಣದ ಪ್ರೀತಿಯು ಸಕಲ ವಿಧವಾದ ಕೆಟ್ಟತನಕ್ಕೆ ಮೂಲವಾಗಿದೆ. ಕೆಲವರು ಅದಕ್ಕಾಗಿ ಆತುರಪಟ್ಟು ನಂಬಿಕೆಯಿಂದ ತಪ್ಪಿಹೋಗಿ ಅನೇಕ ದುಃಖಗಳಿಂದ ತಮ್ಮನ್ನು ತಾವೇ ತಿವಿಸಿ ಕೊಳ್ಳುತ್ತಾರೆ.

2 ತಿಮೊಥೆಯನಿಗೆ 2:22 ಯೌವನದ ಇಚ್ಚೆಗಳಿಂದ ಸಹ ಓಡಿಹೋಗು; ಶುದ್ಧ ಹೃದಯವುಳ್ಳವರಾಗಿ ಕರ್ತನನ್ನು ಬೇಡಿಕೊಳ್ಳು ವವರ ಸಂಗಡ ನೀತಿ ವಿಶ್ವಾಸ ಪ್ರೀತಿ ಸಮಾಧಾನ ಇವುಗಳನ್ನು ಅನುಸರಿಸು.

2 ತಿಮೊಥೆಯನಿಗೆ 3:2,6 ಮನುಷ್ಯರು ತಮ್ಮನ್ನು ತಾವೇ ಪ್ರೀತಿಸಿ ಕೊಳ್ಳುವವರೂ ಲೋಭಿಗಳೂ ಬಡಾಯಿ ಕೊಚ್ಚುವ ವರೂ ಅಹಂಕಾರಿಗಳೂ ದೇವದೂಷಕರೂ ತಂದೆ ತಾಯಿಗಳಿಗೆ ಅವಿಧೇಯರೂ ಉಪಕಾರನೆನಸದವರೂ ಅಶುದ್ಧರೂ 6 ಮನೆ ಗಳಲ್ಲಿ ನುಸುಳಿ ಪಾಪಗಳಿಂದ ತುಂಬಿದವರೂ ನಾನಾ ವಿಧವಾದ ಇಚ್ಛೆಗಳಿಂದ ನಡಿಸಲ್ಪಟ್ಟವರೂ ಆಗಿರುವ ಅವಿವೇಕಿಗಳಾದ ಸ್ತ್ರೀಯರನ್ನು ವಶಮಾಡಿಕೊಳ್ಳು ವವರೂ ಇವರೊಳಗೆ ಸೇರಿದವರೇ.

2 ತಿಮೊಥೆಯನಿಗೆ 4:3 ಯಾಕಂದರೆ ಜನರು ಸ್ವಸ್ಥಬೋಧನೆಯನ್ನು ಸಹಿಸ ಲಾರದ ಕಾಲವು ಬರುತ್ತದೆ; ಅದರಲ್ಲಿ ಅವರು ತೀಟೇ ಕಿವಿಯುಳ್ಳವರಾಗಿ ತಮ್ಮ ದುರಾಶೆಗಳಿಗೆ ಅನುಕೂಲ ವಾದ ಉಪದೇಶಕರನ್ನು ಇಟ್ಟುಕೊಳ್ಳುವರು.

ತೀತನಿಗೆ 2:12 ನಾವು ಭಕ್ತಿಹೀನತೆಯನ್ನೂ ಲೋಕದ ಆಶೆಗಳನ್ನೂ ತೊರೆದು ಈಗಿನ ಲೋಕದಲ್ಲಿ ಸ್ವಸ್ಥಚಿತ್ತರಾಗಿಯೂ ನೀತಿವಂತರಾಗಿಯೂ ಭಕ್ತಿಯುಳ್ಳವರಾಗಿಯೂ ಬದುಕ ಬೇಕೆಂದು ಅದು (ಅ ಕೃಪೆಯು) ನಮಗೆ ಬೋಧಿಸು ತ್ತದೆ.

ತೀತನಿಗೆ 3:3 ನಾವು ಸಹ ಮೊದಲು ಅವಿವೇಕಿಗಳೂ ಅವಿಧೇಯರೂ ಮೋಸಹೋದ ವರೂ ನಾನಾ ವಿಧವಾದ ದುರಾಶೆಗಳಿಗೆ ಮತ್ತು ಭೋಗಗಳಿಗೆ ದಾಸರೂ ಕೆಟ್ಟತನ ಹೊಟ್ಟೇಕಿಚ್ಚುಗಳಲ್ಲಿ ಜೀವಿಸುವವರೂ ಅಸಹ್ಯರೂ ಒಬ್ಬರನ್ನೊಬ್ಬರು ಹಗೆ ಮಾಡುವವರೂ ಆಗಿದ್ದೆವು.

ಇಬ್ರಿಯರಿಗೆ 13:5 ನಿಮ್ಮ ನಡತೆಯು ದ್ರವ್ಯಾಶೆ ಯಿಲ್ಲದ್ದಾಗಿರಲಿ; ನಿಮಗಿರುವವುಗಳಲ್ಲಿ ತೃಪ್ತರಾಗಿರ್ರಿ; ಯಾಕಂದರೆ--ನಾನು ನಿನ್ನನ್ನು ಎಂದಿಗೂ ಕೈಬಿಡುವದಿಲ್ಲ ಇಲ್ಲವೆ ತೊರೆಯುವದಿಲ್ಲವೆಂದು ಆತನು ಹೇಳಿದ್ದಾನೆ.

ಯಾಕೋಬನು 1:14,15 ಆದರೆ ಪ್ರತಿಯೊಬ್ಬನು ತನ್ನ ಸ್ವಂತ ದುರಾಶೆಯಿಂದ ಎಳೆಯಲ್ಪಟ್ಟು ಮರುಳುಗೊಂಡವನಾಗಿ ಶೋಧಿಸಲ್ಪಡುತ್ತಾನೆ. 15 ಆಮೇಲೆ ದುರಾಶೆಯು ಗರ್ಭಧರಿಸಿ ಪಾಪವನ್ನು ಹೆರುತ್ತದೆ; ಪಾಪವು ಸಂಪೂರ್ಣವಾದ ಮೇಲೆ ಮರಣ ವನ್ನು ಹಡೆಯುತ್ತದೆ.

ಯಾಕೋಬನು 4:1-5 ನಿಮ್ಮಲ್ಲಿ ಯುದ್ಧಗಳೂ ಕಾದಾಟಗಳೂ ಎಲ್ಲಿಂದ ಬರುತ್ತವೆ? ನಿಮ್ಮ ಇಂದ್ರಿಯ ಗಳಲ್ಲಿ ಹೋರಾಡುವ ಭೋಗಾಶೆಗಳಿಂದಲೇ ಅಲ್ಲವೇ. 2 ನೀವು ಆಶಿಸಿದರೂ ಹೊಂದದೆ ಇದ್ದೀರಿ. ನೀವು ಕೊಲ್ಲುತ್ತೀರಿ, ಹೊಂದಲು ಅಪೇಕ್ಷಿಸುತ್ತೀರಿ, ಆದರೆ ಪಡೆಯಲಾರಿರಿ. ನೀವು ಕಾದಾಡುತ್ತೀರಿ, ಯುದ್ಧ ಮಾಡುತ್ತೀರಿ. ಆದಾಗ್ಯೂ ನೀವು ಬೇಡಿಕೊಳ್ಳದ ಕಾರಣ ನಿಮಗೇನೂ ದೊರೆಯಲಿಲ್ಲ. 3 ನೀವು ಬೇಡಿದರೂ ಬೇಡಿದ್ದನ್ನು ನಿಮ್ಮ ಭೋಗಗಳಿಗಾಗಿ ಉಪಯೋಗಿಸ ಬೇಕೆಂದು ತಪ್ಪಾಗಿ ಬೇಡಿಕೊಳ್ಳುವದರಿಂದ ನಿಮಗೆ ದೊರೆಯುವದಿಲ್ಲ. 4 ವ್ಯಭಿಚಾರಿಗಳೇ, ವ್ಯಭಿಚಾರಿಣಿ ಯರೇ, ಇಹಲೋಕ ಸ್ನೇಹವು ದೇವವೈರವೆಂದು ನಿಮಗೆ ತಿಳಿಯದೋ? ಲೋಕಕ್ಕೆ ಸ್ನೇಹಿತನಾಗಿರ ಬೇಕೆಂದಿರುವವನು ದೇವರಿಗೆ ವೈರಿಯಾಗಿದ್ದಾನೆ. 5 ಇದಲ್ಲದೆ-- ನಮ್ಮಲ್ಲಿ ವಾಸವಾಗಿರುವ ಆತ್ಮನು ಅಭಿಮಾನತಾಪದಿಂದ ಹಂಬಲಿಸುತ್ತಾನೆಂಬ ಬರಹವು ವ್ಯರ್ಥವಾಗಿ ಹೇಳುತ್ತದೆ ಎಂದು ನೀವು ಭಾವಿಸು ತ್ತೀರೋ?

1 ಪೇತ್ರನು 1:14 ನೀವು ಮುಂಚೆ ಅಜ್ಞಾನಿಗಳಾಗಿದ್ದಾಗ ನಿಮಗಿದ್ದ ದುರಾಶೆಗಳನ್ನು ಅನುಸರಿಸಿ ನಡೆದಂತೆ ಇನ್ನು ನಡೆಯುವವರಾಗಿರದೆ

1 ಪೇತ್ರನು 2:11 ಅತಿ ಪ್ರಿಯರೇ, ಪರದೇಶಸ್ಥರೂ ಪ್ರವಾಸಿಗಳೂ ಆಗಿರುವ ನೀವು ನಿಮ್ಮ ಆತ್ಮಕ್ಕೆ ವಿರೋಧವಾಗಿ ಯುದ್ಧಮಾಡುವ ಶಾರೀರಿಕ ದುರಾಶೆಗಳಿಗೆ ದೂರವಾಗಿ ರಬೇಕೆಂದು ನಾನು ನಿಮ್ಮನ್ನು ಬೇಡಿಕೊಳ್ಳುತ್ತೇನೆ.

1 ಪೇತ್ರನು 4:2-4 ಹೀಗೆ ಶರೀರದಲ್ಲಿ ಇನ್ನು ಉಳಿದಿರುವ ತನ್ನ ಜೀವಿತಕಾಲದಲ್ಲಿ ಮನುಷ್ಯರ ದುರಾಶೆಗಳ ಪ್ರಕಾರ ಬದುಕದೆ ದೇವರ ಚಿತ್ತದ ಪ್ರಕಾರ ಬದುಕುವನು. 3 ಬಂಡುತನ ದುರಾಶೆ ಕುಡಿಕತನ ದುಂದೌತನ ಮದ್ಯಪಾನಗೋಷ್ಠಿ ಅಸಹ್ಯವಾದ ವಿಗ್ರಹಾರಾಧನೆ ಗಳು ಇವುಗಳನ್ನು ನಡಿಸುವದರಲ್ಲಿಯೂ ಅನ್ಯಜನರಿಗೆ ಇಷ್ಟವಾದದ್ದನ್ನು ಮಾಡುವದರಲ್ಲಿಯೂ ನಮ್ಮ ಜೀವಿತ ದಲ್ಲಿ ಕಳೆದುಹೋದ ಕಾಲವೇ ಸಾಕು. 4 ತಾವು ಮಾಡುವ ಅಪರಿಮಿತವಾದ ಪಟಿಂಗತನದಲ್ಲಿ ನೀವು ಅವರೊಂದಿಗೆ ಸೇರದೆ ಇದ್ದದ್ದಕ್ಕೆ ಅವರು ಆಶ್ಚರ್ಯ ಪಟ್ಟು ನಿಮ್ಮನ್ನು ದೂಷಿಸುತ್ತಾರೆ.

2 ಪೇತ್ರನು 1:4 ನೀವು ಲೋಕದಲ್ಲಿ ದುರಾಶೆಯಿಂದುಂಟಾದ ಕೆಟ್ಟತನಕ್ಕೆ ತಪ್ಪಿಸಿಕೊಂಡು ದೈವಸ್ವಭಾವದಲ್ಲಿ ಪಾಲನ್ನು ಹೊಂದುವವರಾಗಬೇಕೆಂದು ಆತನು ಅತ್ಯಂತ ಮಹತ್ವ ವುಳ್ಳ ಅಮೂಲ್ಯವಾದ ವಾಗ್ದಾನಗಳನ್ನು ನಮಗೆ ದಯ ಪಾಲಿಸಿದ್ದಾನೆ.

2 ಪೇತ್ರನು 2:3 ಅವರು ದ್ರವ್ಯಾಶೆಯುಳ್ಳವರಾಗಿ ಕಲ್ಪನೆಯ ಮಾತು ಗಳನ್ನು ಹೇಳುತ್ತಾ ನಿಮ್ಮಿಂದ ಲಾಭವನ್ನು ಸಂಪಾದಿಸ ಬೇಕೆಂದಿರುವರು. ಅಂಥವರಿಗೆ ಬಹಳ ಕಾಲದಿಂದಿದ್ದ ತೀರ್ಪು ತಡವಾಗುವದಿಲ್ಲ. ಅವರಿಗಾಗುವ ನಾಶನವು ತೂಕಡಿಸುವದಿಲ್ಲ.

2 ಪೇತ್ರನು 2:9-19 ಕರ್ತನು ನೀತಿವಂತರನ್ನು ಸಂಕಟದೊಳಗಿಂದ ತಪ್ಪಿಸುವ ದಕ್ಕೂ ಅನೀತಿವಂತರನ್ನು ಶಿಕ್ಷಿಸುವದಕ್ಕಾಗಿ ನ್ಯಾಯ ತೀರ್ಪಿನ ದಿನದ ತನಕ ಇಡುವದಕ್ಕೂ ಬಲ್ಲವನಾಗಿ ದ್ದಾನೆ. 10 ಆದರೆ ಮುಖ್ಯವಾಗಿ ಬಂಡು ತನದ ದುರಾಶೆಯಲ್ಲಿ ಶರೀರಾನುಸಾರ ನಡೆದು ಪ್ರಭುತ್ವವನ್ನು ತಿರಸ್ಕಾರ ಮಾಡುವವರನ್ನು ಹೀಗೆ ಶಿಕ್ಷಿಸುವನು. ಇವರು ಯಾರಿಗೂ ಹೆದರದೆ ಸ್ವೇಚ್ಛಾಪರರಾಗಿದ್ದಾರೆ; ದುರಹಂಕಾರದಿಂದ ಗೌರವವುಳ್ಳವರನ್ನು ದೂಷಿಸುತ್ತಾರೆ. 11 ದೂತರು ಬಲದಲ್ಲಿಯೂ ಮಹತ್ತಿನಲ್ಲಿಯೂ ಶ್ರೇಷ್ಠರಾಗಿದ್ದರೂ ಕರ್ತನ ಮುಂದೆ ಗೌರವವುಳ್ಳವರಿಗೆ ವಿರೋಧವಾಗಿ ನಿಂದೆಯನ್ನೂ ದೂಷಣೆಯನ್ನೂ ತರು ವದಿಲ್ಲ. 12 ಆದರೆ ಹಿಡಿಯಲ್ಪಟ್ಟು ನಾಶವಾಗುವದಕ್ಕೆ ಹುಟ್ಟಿರುವ ವಿವೇಕ ಶೂನ್ಯ ಮೃಗಗಳಂತಿರುವ ಈ ದುರ್ಮಾರ್ಗಿಗಳು ತಮಗೆ ತಿಳಿಯದವುಗಳ ವಿಷಯ ವಾಗಿ ದೂಷಣೆ ಹೇಳುವವರಾಗಿದ್ದಾರೆ; ಇವರು ತಮ್ಮ ಕೆಟ್ಟತನದಿಂದ ಸಂಪೂರ್ಣ ನಾಶವಾಗುವವರಾಗಿ 13 ತಮ್ಮ ದುರ್ನೀತಿಗೆ ಸರಿಯಾದ ದುಷ್ಫಲವನ್ನು ಹೊಂದುವರು. ದುಂದುಗಾರಿಕೆಯಲ್ಲಿ ಹಗಲನ್ನು ಕಳೆಯುವದೇ ಸುಖವೆಂದೆಣಿಸುತ್ತಾರೆ. ಇವರು ನಿಮ್ಮ ಸಂಗಡ ಸೇರಿ ಔತಣ ಮಾಡುತ್ತಿರುವಾಗ ವಂಚಕ ರಾಗಿದ್ದು ಕಳಂಕಕ್ಕೂ ನಿಂದೆಗೂ ಕಾರಣರಾಗಿದ್ದಾರೆ. 14 ಇವರು

ಜಾರತ್ವದಿಂದ ತುಂಬಿದ ಮತ್ತು ಪಾಪವನ್ನು ಬಿಡಲೊಲ್ಲದ ಕಣ್ಣುಳ್ಳವರೂ ಚಪಲ ಚಿತ್ತರನ್ನು ಮರುಳು ಗೊಳಿಸುವವರೂ ಲೋಭಗಳಲ್ಲಿ ತೇರ್ಗಡೆ ಹೊಂದಿದ ಹೃದಯವುಳ್ಳವರೂ ಶಾಪದ ಮಕ್ಕಳೂ ಆಗಿದ್ದಾರೆ. 15 ಇವರು ನೀಟಾದ ಮಾರ್ಗವನ್ನು ಬಿಟ್ಟು ಬೆಯೋರನ ಮಗನಾದ ಬಿಳಾಮನ ಮಾರ್ಗವನ್ನು ಹಿಡಿದು ತಪ್ಪಿಹೋಗಿದ್ದಾರೆ. ಈ ಬಿಳಾಮನು ಅನೀತಿಯಿಂದ ದೊರಕುವ ಸಂಬಳವನ್ನು ಪ್ರೀತಿಸಿದನು. 16 ಆದರೆ ಅವನ ದುಷ್ಟತ್ವಕ್ಕೆ ಖಂಡನೆಯಾಯಿತು; ಮೂಕ ಕತ್ತೆಯು ಮನುಷ್ಯ ಸ್ವರದಿಂದ ಮಾತನಾಡಿ ಆ ಪ್ರವಾದಿಯ ಹುಚ್ಚುತನಕ್ಕೆ ಅಡ್ಡಿ ಮಾಡಿತು. 17 ಇವರು ನೀರಿಲ್ಲದ ಭಾವಿಗಳೂ ಬಿರುಗಾಳಿಯಿಂದ ಬಡಿಸಿಕೊಂಡು ಹಾರಿ ಹೋಗುವ ಮೇಘಗಳೂ ಆಗಿದ್ದಾರೆ. ಇಂಥವರ ಪಾಲಿಗೆ ನಿರಂತರವಾದ ಕಾರ್ಗತ್ತಲು ಇಟ್ಟಿರುವದು. 18 ತಪ್ಪಾದ ಮಾರ್ಗದಲ್ಲಿ ಜೀವಿಸುವವರಿಂದ ಸಂಪೂರ್ಣವಾಗಿ ತಪ್ಪಿಸಿಕೊಂಡವರ ಸಂಗಡ ಇವರು ಹುರುಳಿಲ್ಲದ ದೊಡ್ಡ ದೊಡ್ಡ ಮಾತುಗಳನ್ನಾಡಿ ಶರೀರದ ದುರಾಶೆಗಳನ್ನು ಹುಟ್ಟಿಸಿ ಹೆಚ್ಚಾದ ಬಂಡುತನದಿಂದ ಅವರನ್ನು ಮರುಳುಗೊಳಿಸುತ್ತಾರೆ. 19 ಇಂಥವರು ಸ್ವಾತಂತ್ರ್ಯ ಕೊಡುತ್ತೇವೆಂದು ಅವರಿಗೆ ವಾಗ್ದಾನ ಮಾಡುತ್ತಾರೆ, ಆದರೆ ತಾವೇ ಕೆಟ್ಟತನದ ದಾಸತ್ವ ದೊಳಗಿದ್ದಾರೆ. ಯಾಕಂದರೆ ಒಬ್ಬನು ಯಾವದಕ್ಕೆ ಸೋತು ಹೋಗಿರುವನೋ? ಅವನು ಅದರ ದಾಸತ್ವ ದೊಳಗಿರುವನಷ್ಟೆ.

2 ಪೇತ್ರನು 3:3 ಕಡೇ ದಿವಸಗಳಲ್ಲಿ ತಮ್ಮ ದುರಾಶೆಗಳ ಪ್ರಕಾರ ನಡೆಯುವ ಕುಚೋದ್ಯಗಾರರು ಬಂದು--

1 ಯೋಹಾನನು 2:15-17 ಲೋಕವನ್ನಾಗಲಿ ಲೋಕದಲ್ಲಿರುವವುಗಳ ನ್ನಾಗಲಿ ಪ್ರೀತಿಸಬೇಡಿರಿ. ಯಾವನಾದರೂ ಲೋಕ ವನ್ನು ಪ್ರೀತಿಸಿದರೆ ತಂದೆಯ ಪ್ರೀತಿಯು ಅವನಲ್ಲಿಲ್ಲ. 16 ಲೋಕದಲ್ಲಿರುವವುಗಳೆಲ್ಲವು ಅಂದರೆ ಶರೀರದಾಶೆ, ಕಣ್ಣಿನಾಶೆ, ಜೀವನದ ಗರ್ವ ಇವು ತಂದೆಗೆ ಸಂಬಂಧ ಪಟ್ಟವುಗಳಲ್ಲ, ಲೋಕಕ್ಕೆ ಸಂಬಂಧಪಟ್ಟವುಗಳಾಗಿವೆ. 17 ಲೋಕವು ಅದರ ಆಶೆಯೂ ಗತಿಸಿಹೋಗುತ್ತವೆ,

ಆದರೆ ದೇವರ ಚಿತ್ತವನ್ನು ನೆರವೇರಿಸುವವನು ಎಂದೆಂದಿಗೂ ಇರುವನು.

ಯೂದನು 1:11 ಅವರು ಕಾಯಿನನ ಮಾರ್ಗ ಹಿಡಿದವರೂ ಪ್ರತೀಕಾರ ಹೊಂದುವದಕ್ಕಾಗಿ ಬಿಳಾಮನ ದೋಷವನ್ನು ಮಾಡುವದಕ್ಕೆ ದುರಾಶೆ ಯಿಂದ ಓಡುವವರೂ ಕೋರಹನಂತೆ ಎದುರು ಮಾತನಾಡಿ ನಾಶವಾಗುವವರೂ ಆಗಿರುವ ಅವರಿಗೆ ಅಯ್ಯೋ!

ಯೂದನು 1:15-19 ಎಲ್ಲರಿಗೆ ನ್ಯಾಯ ತೀರಿಸುವದಕ್ಕೂ ಅವರಲ್ಲಿ ಭಕ್ತಿಹೀನರೆಲ್ಲರು ಮಾಡಿದ ಭಕ್ತಿಯಿಲ್ಲದ ಅವರ ಎಲ್ಲಾ ಕೃತ್ಯಗಳ ವಿಷಯವಾಗಿ ಮತ್ತು ಭಕ್ತಿಯಿಲ್ಲದ ಪಾಪಿಷ್ಠರು ತನಗೆ ವಿರೋಧವಾಗಿ ಆಡಿದ ಎಲ್ಲಾ ಕಠಿಣವಾದ ಮಾತುಗಳ ವಿಷಯವಾಗಿ ಅವರಿಗೆ ಮನದಟ್ಟು ಮಾಡುವದಕ್ಕೂ ಬಂದನು ಎಂಬ ದಾಗಿ ಪ್ರವಾದಿಸಿದನು. 16 ಇವರು ಗುಣುಗುಟ್ಟು ವವರೂ ದೂರುವವರೂ ತಮ್ಮ ದುರಾಶೆಗಳನ್ನನುಸರಿಸಿ ನಡೆಯುವವರೂ ಆಗಿದ್ದಾರೆ. ಇವರ ಬಾಯಿಯು ದೊಡ್ಡ ದೊಡ್ಡ ಮಾತುಗಳನ್ನು ಆಡುತ್ತದೆ. ಇವರು ಸ್ವಪ್ರಯೋಜನಕ್ಕಾಗಿ ಮುಖಸ್ತುತಿ ಮಾಡುತ್ತಾರೆ. 17 ಪ್ರಿಯರೇ, ನೀವಾದರೋ ನಮ್ಮ ಕರ್ತನಾದ ಯೇಸು ಕ್ರಿಸ್ತನ ಅಪೊಸ್ತಲರು ಮೊದಲು ಹೇಳಿದ ಮಾತುಗಳನ್ನು ಜ್ಞಾಪಕಮಾಡಿಕೊಳ್ಳಿರಿ. 18 ಭಕ್ತಿಗೆ ವಿರುದ್ಧವಾದ ತಮ್ಮ ಆಶೆಗಳನ್ನು ಅನುಸರಿಸಿ ನಡೆಯುವ ಕುಚೋದ್ಯಗಾರರು ಅಂತ್ಯಕಾಲದಲ್ಲಿ ಇರುವರೆಂದು ಅವರು ನಿಮಗೆ ಹೇಳಿದರು. 19 ಇವರು ತಮ್ಮನ್ನು ತಾವು ಪ್ರತ್ಯೇಕಿಸಿಕೊಳ್ಳುವವರೂ ಪ್ರಾಕೃತಮನುಷ್ಯರೂ ಆತ್ಮವಿಲ್ಲದವರೂ ಆಗಿದ್ದಾರೆ.

ಪ್ರಕಟನೆ 18:14 ನಿನ್ನ ಜೀವವು ಅಪೇಕ್ಷಿಸಿದ ಹಣ್ಣು ಗಳು ನಿನ್ನನ್ನು ಬಿಟ್ಟು ಹೋದವು; ಸೊಗಸಾಗಿಯೂ ಶೋಭಾಯಮಾನವಾಗಿಯೂ ಇರುವವುಗಳೆಲ್ಲವೂ ನಿನ್ನನ್ನು ಬಿಟ್ಟು ಹೋದವು. ಅವು ಇನ್ನು ಮೇಲೆ ನಿನಗೆ ಸಿಕ್ಕುವದೇ ಇಲ್ಲ.

Pastor T. John Franklin
Church of Salvation, Healing, and Deliverance
COS-HAD.org